ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜ ನಿ : ಸುಮಪ : 2020–21 ದಿನಾಂಕ : 17–08–2020

# ಪತ್ರಿಕಾ ಪ್ರಕಟಣೆ

## ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಶಾಸಕ ಕೆ. ಶಿವಾನಗೌಡ ನಾಯಕ್ ಅಧಿಕಾರ ಸ್ವೀಕಾರ

**ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):**

ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾಗಿ ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ಶಿವಾನಗೌಡ ನಾಯಕ್ ಅವರು ಇಂದು ಅಧಿಕಾರ ಸ್ವೀಕರಿಸಿದರು. ಸಮಾರಂಭದಲ್ಲಿ ವಸತಿ ಸಚಿವ ವಿ.ಸೋಮಣ್ಣ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

## ಬ್ಯಾಂಕ್ ಅಧಿಕಾರಿಗಳ – ಗುಮಾಸ್ತರ ನೇಮಕಾತಿ ಪರೀಕ್ಷೆಗೆ ಆನ್‌ಲೈನ್ ತರಬೇತಿ

**ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಐ.ಬಿ.ಪಿ.ಎಸ್ ರಾಷ್ಟ್ರೀಕೃತ ಬ್ಯಾಂಕ್ ನವರು ಮುಂದಿನ ದಿನಗಳಲ್ಲಿ ಒಂಭತ್ತು ಸಾವಿರ ಅಧಿಕಾರಿಗಳ ಮತ್ತು ಗುಮಾಸ್ತರ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಲು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಆನ್‌ಲೈನ್‌ನಲ್ಲಿ ನೀಡಲು ಆಯೋಜಿಸಿದೆ.

**ಆಸಕ್ತರು ಆಗಸ್ಟ್ 25 ರೊಳಗೆ ಹೆಸರನ್ನು ನೊಂದಾಯಿಸಿಕೊಳ್ಳಲು 0821–2515944 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದೆಂದು ಕರಾಮುವಿ ಕುಲಸಚಿವರಾದ ಪ್ರೊ. ಲಿಂಗರಾಜಗಾಂಧಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

ಡಿ.ಜೆ. ಹಳ್ಳಿ ಮತ್ತು ಕೆ.ಜಿ. ಹಳ್ಳಿಯಲ್ಲಿ ಸಂಭವಿಸಿದ ಗಲಭೆ ಪ್ರಕರಣ ಕುರಿತು
ರಾಜ್ಯ ಉಚ್ಛ ನ್ಯಾಯಾಲಯಕ್ಕೆ ಮನವಿ ಸಲ್ಲಿಕೆ
- ಮುಖ್ಯಮಂತ್ರಿ ಬಿ.ಎಸ್.ವೈ

**ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):**

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಿದ್ದು, ಅದರಲ್ಲಿ ಈ ಕೆಳಕಂಡವರು ಭಾಗವಹಿಸಿರುತ್ತಾರೆ. ಬಸವರಾಜ ಬೊಮ್ಮಾಯಿ, ಮಾನ್ಯ ಗೃಹಮಂತ್ರಿಗಳು, ಟಿ.ಎಂ.ವಿಜಯಭಾಸ್ಕರ್, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಪ್ರಭುಲಿಂಗ ನಾವಡಗಿ, ಅಡ್ವೋಕೇಟ್ ಜನರಲ್ , ರಜನೀಶ್ ಗೋಯೆಲ್, ಅಪರ ಮುಖ್ಯ ಕಾರ್ಯದರ್ಶಿಗಳು, ಗೃಹ ಇಲಾಖೆ, ಪ್ರವೀಣ್ ಸೂದ್, ಪೊಲೀಸ್ ಮಹಾ ನಿರ್ದೇಶಕರು, ಬಿ. ದಯಾನಂದ ಅಪರ ಮಹಾ ನಿರ್ದೇಶಕರು, ರಾಜ್ಯ ಗುಪ್ತ ವಾರ್ತೆ, ಕಮಲ್‌ಪಂತ್, ಪೊಲೀಸ್ ಆಯುಕ್ತರು, ಬೆಂಗಳೂರು ನಗರ, ಅಮರ ಕುಮಾರ್ ಪಾಂಡೆ, ಅಪರ ಮಹಾ ನಿರ್ದೇಶಕರು, ಕಾನೂನು ಮತ್ತು ಸುವ್ಯವಸ್ಥೆ

ಬೆಂಗಳೂರು ನಗರದ ಡಿ.ಜೆ. ಹಳ್ಳಿ ಮತ್ತು ಕೆ.ಜಿ. ಹಳ್ಳಿಯಲ್ಲಿ ಸಂಭವಿಸಿದ ಗಲಭೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕ ಹಾಗೂ ಖಾಸಗಿ ಸ್ವತ್ತುಗಳಿಗೆ ಉಂಟಾಗಿರುವ ಹಾನಿಯನ್ನು ಗಲಭೆ ಕೋರರಿಂದ ವಸೂಲು ಮಾಡುವ ಬಗ್ಗೆ ರಾಜ್ಯ ಉಚ್ಛ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿ, ಈಗಾಗಲೇ ನೀಡಲಾಗಿರುವ ದೇಶದ ಉಚ್ಛ ನ್ಯಾಯಾಲಯದ ಆದೇಶದಂತೆ ಕ್ಲೇಮ್ ಕಮಿಷನರ್ ನೇಮಿಸಲು ಕೋರುವ ಬಗ್ಗೆ ತೀರ್ಮಾನಿಸಲಾಯಿತು. ಉಪಸ್ಥಿತರಿದ್ದ ಹಿರಿಯ ಪೊಲೀಸ್ ಅಧಿಕಾರಿಗಳು ಈ ಗಲಭೆಗಳಿಗೆ ಸಂಬಂಧಿಸಿದಂತೆ ಈಗಾಗಲೇ ಕೈಗೊಂಡಿರುವ ಕಠಿಣ ಕ್ರಮಗಳ ಬಗ್ಗೆ ಮುಖ್ಯಮಂತ್ರಿಗಳಿಗೆ ವಿವರಿಸಿದರು. ಅಲ್ಲದೇ ಈ ಪ್ರಕರಣಗಳಲ್ಲಿ ಕಾನೂನು ಬಾಹಿರ ಚಟುವಟಿಕೆಗಳ ತಡೆ ಕಾಯಿದೆ(UAPA)ಯನ್ನು ಸಹ ಅಳವಡಿಸಿರುವುದರ ಬಗ್ಗೆ ತಿಳಿಸಲಾಯಿತು.

ಈ ತನಿಖೆಗಳನ್ನು ತ್ವರಿತವಾಗಿ ಕೈಗೊಳ್ಳಲು ಒಂದು ವಿಶೇಷ ತನಿಖಾ ತಂಡವನ್ನು ರಚಿಸಲಾಗಿರುತ್ತದೆ. ಈಗಾಗಲೇ ದಾಖಲಾಗಿರುವ ಅಪರಾಧ ಪ್ರಕರಣಗಳ ತ್ವರಿತ ಹಾಗೂ ಪರಿಣಾಮಕಾರಿ ವಿಚಾರಣೆಗೆ ಅನುವಾಗುವಂತೆ ಮೂರು ಸದಸ್ಯರನ್ನು ಒಳಗೊಂಡ ವಿಶೇಷ ಅಭಿಯೋಜಕರ ತಂಡವನ್ನು ರಚಿಸಲಾಗುವುದು. ಈ ಅಪರಾಧ ಪ್ರಕರಣಗಳಲ್ಲಿ ಬಂಧಿತ ಅಪರಾಧಿಗಳಿಗೆ ಸಂಬಂಧಪಟ್ಟಂತೆ ಅವಶ್ಯ ಕಂಡವರನ್ನು ಗುಂಡಾ ಕಾಯಿದೆಯಡಿಯಲ್ಲಿ ಸಹ ಕ್ರಮ ಕೈಗೊಳ್ಳಲಾಗುವುದು.

## ಡಿ ಜೆ ಹಳ್ಳಿ,ಕಾವಲ್‌ಬೈರಸಂದ್ರ ಗಲಭೆ ಪ್ರಕರಣ ಕುರಿತು ಸಭೆ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಅಧ್ಯಕ್ಷತೆಯಲ್ಲಿ ಇಂದು ಬೆಂಗಳೂರಿನ ಡಿ ಜೆ ಹಳ್ಳಿ,ಕಾವಲ್‌ಬೈರಸಂದ್ರ ಗಲಭೆ ಪ್ರಕರಣಕ್ಕೆ ಸಂಬಂದಿಸಿದಂತೆ ಪ್ರಕರಣಕ್ಕೆ ಅವರ ನಿವಾಸ ಕಾವೇರಿಯಲ್ಲಿ ನಡೆದ ಸಭೆಯಲ್ಲಿ ಗೃಹ ಸಚಿವ ಬಸವರಾಜ ಬೊಮ್ಮಾಯಿ, ಅಡ್ವೊಕೇಟ್ ಜನರಲ್ ಪ್ರಭುಲಿಂಗ ನಾವಡಗಿ, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಗೃಹ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಡಿ.ಜಿ.ಐ.ಜಿ.ಪಿ. ಪ್ರವೀಣ್ ಸೂದ್,   ನಗರ ಪೋಲೀಸ್ ಆಯುಕ್ತ ಕಮಲ್ ಪಂತ್ ಉಪಸ್ಥಿತರಿದ್ದರು.

ಛಾಯಚಿತ್ರ ಲಗತ್ತಿಸಿದೆ)

## ಸಾಲ ಮತ್ತು ಸಹಾಯಧನ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):

"2020-21"ನೇ ಸಾಲಿನಲ್ಲಿ ಉಪ್ಪಾರ ಮತ್ತು ಅದರ ಉಪಜಾತಿಗಳ ಜನರ ಆರ್ಥಿಕ ಅಭಿವೃದ್ಧಿಗಾಗಿ, ಸ್ವಯಂ ಉದ್ಯೋಗ ಸಾಲ ಯೋಜನೆ ಮತ್ತು ಅರಿವು ಶೈಕ್ಷಣಿಕ ಸಾಲ ಯೋಜನೆಗಳಲ್ಲಿ ಸಾಲ ಮತ್ತು ಸಹಾಯಧನದ ಸೌಲಭ್ಯ ಪಡೆಯಲು ಜಿಲ್ಲಾ ವ್ಯವಸ್ಥಾಪಕರು ಬೆಂಗಳೂರು ದಕ್ಷಿಣ ಕಛೇರಿಯಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಮೇಲ್ಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಇಚ್ಛಿಸುವ, ಉಪ್ಪಾರ ಮತ್ತು ಅದರ ಉಪಜಾತಿಗಳಿಗೆ ಸೇರಿದವರು ಉಚಿತವಾಗಿ ಅರ್ಜಿ ನಮೂನೆಯನ್ನು ಜಿಲ್ಲಾ ಕಛೇರಿಯಲ್ಲಿ ಅಥವಾ ನಿಗಮದ ವೆಬ್‌ಸೈಟ್‌ನಲ್ಲಿ ಪಡೆದು, ಅರ್ಜಿಯೊಂದಿಗೆ ಜಾತಿ ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮತ್ತು ಫೋಟೋ ಮತ್ತು ಇತರೆ ದಾಖಲಾತಿಗಳನ್ನು ನಿಗಮದ ವೆಬ್‌ಸೈಟ್ www.dbcdc.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅಥವಾ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಇದ್ದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಈ ಮೇಲ್ಕಂಡ ವಿಳಾಸದ ಜಿಲ್ಲಾ ಕಛೇರಿಗೆ ದಿನಾಂಕ: 05-09-2020ರೊಳಗೆ ಸಲ್ಲಿಸುವುದು ಹಾಗೂ ಸದರಿ ಸಮುದಾಯದವರು ಈ ಹಿಂದೆ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ ಯಾವುದಾರರೂ ಯೋಜನೆಯಡಿ ಸಾಲ ಸೌಲಭ್ಯ ಪಡೆದಿದ್ದರೆ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಒಂದು ವೇಳೆ ಅರ್ಜಿ ಸಲ್ಲಿಸಿದ್ದಲ್ಲಿ ತಿರಸ್ಕರಿಸಲಾಗುವುದು. ಯೋಜನೆಗಳ ಬಗ್ಗೆ ಹಾಗೂ ಇತರೆ ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ಹಾಗೂ ಜಿಲ್ಲಾ ವ್ಯವಸ್ಥಾಪಕರು ಬೆಂಗಳೂರು ದಕ್ಷಿಣ ಕಛೇರಿಯನ್ನು ಸಂಪರ್ಕಿಸುವಂತೆ ತಿಳಿಸಿದೆ.

## ಕೊರೋನಾ ಭಯ!
## ಮಾನಸಿಕ ಆರೋಗ್ಯ ಸಹಾಯವಾಣಿಗೆ ಕರೆ ಮಾಡಿ

**ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):**

ಕೊರೋನಾ ರೋಗ ಕುರಿತು ಸಾರ್ವಜನಿಕರಲ್ಲಿ ಅತಿಯಾದ ಚಿಂತೆ, ಸದಾಕಾಲ ಚಡಪಡಿಸುವಿಕೆ, ಆತ್ಮಹತ್ಯೆಯ ಆಲೋಚನೆಗಳು, ಯಾವುದೇ ಅಸಹಜ ವರ್ತನೆ, ಮಧ್ಯಪಾನದ ದುಶ್ಚಟ ರೀತಿಯ ತೊಂದರೆಗಳಿದ್ದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ಮನೋವೈದ್ಯರನ್ನು ಸಂಪರ್ಕಿಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ 24/7 ಆರೋಗ್ಯ ಸಹಾಯವಾಣಿ 104 ನ್ನು ಸಂಪರ್ಕಿಸಬಹುದಾಗಿದೆ. ಸಹಾಯವಾಣಿಯು 24/7 ಕಾರ್ಯನಿರ್ವಹಿಸಲಿದ್ದು ಉಚಿತವಾಗಿರುತ್ತದೆ. ಕೊರೋನ ಭಯದಿಂದ ಮಾನಸಿಕವಾಗಿ ಭಯಪಟ್ಟವರು ನೆರವಿಗಾಗಿ ಹಾಗೂ ಸಮಾಲೋಚನೆಗಾಗಿ 104ಕ್ಕೆ ಕರೆಮಾಡಿದ ನಂತರ 4ನ್ನು ಒತ್ತಲು ಕೋರಿದೆ. ಕರೆ ಮಾಡಿದ ನಂತರ ಒಂದು ಗಂಟೆಯ ಒಳಗಾಗಿ ತಜ್ಞರು ನಿಮ್ಮನ್ನು ಸಂಪರ್ಕಿಸಿ ಸಮಾಲೋಚನೆ ನಡೆಸಲಿದ್ದಾರೆ. ಸಮಾಲೋಚನೆಯು ಕನ್ನಡ, ಇಂಗ್ಲೀಷ್ ಹಾಗೂ ಹಿಂದಿ ಭಾಷೆಗಳಲ್ಲಿ ಲಭ್ಯವಿರುತ್ತದೆ. ಸಮಾಲೋಚನೆಯ ವಿವರಗಳು ಗೌಪ್ಯವಾಗಿರಲಿದ್ದು ಸಾರ್ವಜನಿಕರು ಆತಂಕ ಪಡುವ ಅಗತ್ಯವಿರುವುದಿಲ್ಲ.

ಸಾವಿರಾರು ಸಾರ್ವಜನಿಕರು ಈಗಾಗಲೇ ಈ ಸಮಾಲೋಚನೆಯ ಸಹಾಯ ಪಡೆದಿದ್ದಾರೆ. ಕೊರೋನ ಆರಂಭವಾದ ಕಳೆದ ಮಾರ್ಚ್ ಮಾಹೆಯಲ್ಲಿ 1331, ಏಪ್ರಿಲ್ 2372, ಮೇ 2495, ಜೂನ್ 1879, ಜುಲೈ 1159, ಆಗಸ್ಟ್‌ನಲ್ಲಿ 669 ರಷ್ಟು ಜನರಿಗೆ ದೂರವಾಣಿ ಮುಖಾಂತರ ಸಲಹೆ ನೀಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):**

ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2020-21ನೇ ಸಾಲಿನಲ್ಲಿ ನಿಗಮದ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯಲ್ಲಿ ವಾಸವಿರುವ ವಿಶ್ವಕರ್ಮ ಸಮುದಾಯದವರು ಸಾಲ-ಸೌಲಭ್ಯ ಪಡೆಯಲು ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಪಡೆಯಬಹುದು. ಅರ್ಜಿಗಳನ್ನು ದಿನಾಂಕ:31/08/2020ರೊಳಗೆ ಪಡೆಯಬೇಕು ಹಾಗೂ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ

ದಾಖಲಾತಿಗಳೊಂದಿಗೆ ದಿನಾಂಕ:16/09/2020ರೊಳಗೆ ಸಲ್ಲಿಸುವುದು. ದಿನಾಂಕ: 16/9/2020ರ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

ಸಾಮಾನ್ಯ ಅರ್ಹತೆಗಳು.

1. ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ಸರ್ಕಾರದ ಆದೇಶ ಸಂಖ್ಯೆ:ಸಕಇ/225/ಬಿಸಿಎ/2000 ದಿನಾಂಕ:30/03/2002ರನ್ವಯ ವಿಶ್ವಕರ್ಮ ಸಮುದಾಯ ಹಾಗೂ ಅದರ ಉಪ ಜಾತಿಗಳಿಗೆ ಸೇರಿರಬೇಕು.
2. ಗಂಗಾ ಕಲ್ಯಾಣಯೋಜನೆಯಲ್ಲಿ ನೀರಾವರಿ ಸೌಲಭ್ಯ ಪಡೆಯಲು ಅರ್ಜಿದಾರರರು ಸಣ್ಣ ಮತ್ತು ಅತಿಸಣ್ಣ ರೈತರಾಗಿರಬೇಕು ಹಾಗೂ ಒಂದೇ ಕಡೆ ಹೊಂದಿಕೊಂಡಿರುವಂತೆ ಕನಿಷ್ಠ 2ಎಕರೆ ಹಾಗೂ ಗರಿಷ್ಠ 5 ಎಕರೆ ಜಮೀನು ಹೊಂದಿರಬೇಕು. (ಯಶವಂತಪುರ, ಆನೇಕಲ್ ಹಾಗೂ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರಗಳಿಗೆ ಮಾತ್ರ).
3. ವಯೋಮಿತಿ 18ವರ್ಷಗಳಿಂದ 55ವರ್ಷಗಳ ಮಿತಿಯಲ್ಲಿರಬೇಕು.

ರಾಜ್ಯ ಸರ್ಕಾರದ ಯೋಜನೆಗಳು:-1. ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು. 2. ಸ್ವಯಂ ಉದ್ಯೋಗ ನೇರಸಾಲ ಯೋಜನೆ. 3. ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ. 4. ಅರಿವು-ಶೈಕ್ಷಣಿಕ ಸಾಲ ಯೋಜನೆ. 5. ಮಹಿಳೆಯರಿಗೆ ಮೈಕ್ರೋ ಕ್ರೆಡಿಟ್ ಸಾಲ ಯೋಜನೆ. 6. ಕಮ್ಮಾರಿಕೆ, ಅಕ್ಕಸಾಲಿ ಮತ್ತು ಬಡಗಿ ಉದ್ಯಮಿಗಳಿಗೆ ತರಬೇತಿ ಮತ್ತು ಸಾಲ ಯೋಜನೆ. ಈ ಯೋಜನೆಯಲ್ಲಿ ಸಾಲ-ಸೌಲಭ್ಯ ಪಡೆಯಲು ಇಚ್ಛಿಸುವವರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.40,000/-ಗಳಿಗಿಂತ ಹಾಗೂ ಪಟ್ಟಣ ಪ್ರದೇಶದವರಿಗೆ ರೂ.55,000/-ಗಳಿಗಿಂತ ಕಡಿಮೆ ಇರಬೇಕು. (ಅರಿವು ಯೋಜನೆಗೆ ವಾರ್ಷಿಕ ವರಮಾನ ರೂ.3.50ಲಕ್ಷಗಳ ಮಿತಿ ಇರಬೇಕು)

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಗೆ ಸೇರಿದ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಫಲಾಪೇಕ್ಷಿಗಳು, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಉಚಿತ ಅರ್ಜಿಗಳನ್ನು ಪಡೆಯುವುದು. ಅಲ್ಲದೆ ನಿಗಮದ ವೆಬ್‌ಸೈಟ್ **website: www.karnataka. gov.in/kvcdcl** ಇಲ್ಲಿ ಪಡೆಯಬಹುದಾಗಿರುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ/ದಾಖಲಾತಿಗಳೊಂದಿಗೆ ದಿನಾಂಕ:16-9-2020ರೊಳಗೆ ಸಲ್ಲಿಸುವುದು. ದಿನಾಂಕ:16-9-2020ರ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್:**website: www.karnataka. gov.in/kvcdcl** ಸಂಪರ್ಕಿಸುವುದು.

# ಕೋವಿಡ್ –19 ರಿಂದ ಗುಣಮುಖರಾಗಿದ್ದಲ್ಲಿ ನಿಮ್ಮ ಪ್ಲಾಸ್ಮಾ ಮತ್ತೊಬ್ಬರ ಜೀವ ಉಳಿಸಬಹುದು

**ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):**

ಕೋವಿಡ್ –19 ರಿಂದ ಗುಣಮುಖರಾಗಿರುವವರು ಮತ್ತೊಬ್ಬರ ಜೀವ ಉಳಿಸಲು ಒಂದು ಸದವಕಾಶ ಅಂದರೆ ಪ್ಲಾಸ್ಮಾ ದಾನ ಮಾಡುವುದರಿಂದ ಮತ್ತೊಬ್ಬರ ಜೀವ ಉಳಿಸಿದ ನೆಮ್ಮದಿ ಸಿಗುತ್ತದೆ. ಕೋವಿಡ್19 ಯೋಧರಾಗಿ ಪ್ಲಾಸ್ಮಾ ದಾನ ಮಾಡಿ, ಜೀವಗಳನ್ನು ಉಳಿಸಿ.

ಪ್ಲಾಸ್ಮಾ ದಾನ ಮಾಡುವ ಪ್ರಕ್ರಿಯೆ ಬಹಳ ಸರಳವಾಗಿದ್ದು ವಯಸ್ಸು 18 ರಿಂದ 60 ರೊಳಗಿನ ಪುರುಷರು ಮತ್ತು ಗರ್ಭ ಧರಿಸದೇ ಇರುವ ಮಹಿಳೆಯರು ದಾನ ಮಾಡಬಹುದು. ತೂಕ 50 ಕೆಜಿಗಿಂತ ಹೆಚ್ಚಿರಬೇಕು. ಆಸ್ಪತ್ರೆಯಿಂದ ಬಿಡುಗಡೆಯಾದ 28 ದಿನಗಳ ನಂತರ ದಾನ ಮಾಡಬಹುದು.

ಪ್ಲಾಸ್ಮಾ ದಾನವು ಸುರಕ್ಷಿತ ಮತ್ತು ಸರಳ ವಿಧಾನವಾಗಿದ್ದು ದಾನಿಗಳ ಪೋಷಣೆ ಮತ್ತು ಆರೈಕೆಗಾಗಿ ರೂ. 5000/– ನೀಡಲಾಗುವುದು.

ಪ್ಲಾಸ್ಮಾವನ್ನು ಟ್ರಾನ್ಸ್‌ಫ್ಯೂಷನ್ ಮೆಡಿಸನ್ ವಿಭಾಗ (ರಕ್ತನಿಧಿ ಕೇಂದ್ರ) ಪ್ಲಾಸ್ಮಾ ದಾನ ಕೇಂದ್ರ, ವಿಕ್ಟೋರಿಯಾ ಆಸ್ಪತ್ರೆ ಕ್ಯಾಂಪಸ್, ಕೆ.ಆರ್. ಮಾರುಕಟ್ಟೆ, ದೂರವಾಣಿ 080–47190606 ಇ ಮೇಲ್ bngu.victoriahospital.bb@gmail.com ಸಂಪರ್ಕಿಸಬಹುದಾಗಿದೆ.

# ದತ್ತು ಸ್ವೀಕಾರ

**ಬೆಂಗಳೂರು, ಆಗಸ್ಟ್ 17(ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಮೃಗಾಲಯ, ಮೈಸೂರು ಪ್ರಾಣಿಗಳ ದತ್ತು ಸ್ವೀಕಾರ ಯೋಜನೆ ಅಡಿಯಲ್ಲಿ ಬೆಂಗಳೂರಿನ ಮೆ:ಆನ್‌ವಾಸೆ ಎಕ್ಸಿಮ್ ಪ್ರೈ.ಲಿ. ಅವರು ಚಿರತೆಯನ್ನು ರೂ.35,000 ಹಾಗೂ ಮೈಸೂರಿನ ದೆಬಾಂಗ್ಷಿ ಚಕ್ರಬರ್ತಿ ಅವರು ಚುಕ್ಕೆ ಜಿಂಕೆಯನ್ನು ರೂ.7500 ಪಾವತಿಸಿ ಒಂದು ವರ್ಷದ ಅವಧಿಗೆ ದತ್ತು ಸ್ವೀಕರಿಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಕೇರಳ ರಾಜ್ಯಕ್ಕೆ ಕೆ.ಎಸ್.ಆರ್.ಟಿ.ಸಿ. ಬಸ್ ಸೌಲಭ್ಯ

**ಬೆಂಗಳೂರು, ಆಗಸ್ಟ್ 17 (ಕರ್ನಾಟಕ ವಾರ್ತೆ):**

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಓಣಂ ಹಬ್ಬದ ಪ್ರಯುಕ್ತ ಕೇರಳ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ರಾಜ್ಯಕ್ಕೆ ವಿಶೇಷ ಸಾರಿಗೆಗಳನ್ನು ದಿನಾಂಕ 24.08.2020 ರಿಂದ ದಿನಾಂಕ 06.09.2020ರವರೆಗೆ ಬೆಂಗಳೂರಿನಿಂದ ಮತ್ತು ಮೈಸೂರಿನಿಂದ ಕೇರಳ ರಾಜ್ಯದ ವಿವಿಧ ಸ್ಥಳಗಳಿಗೆ ಕಾರ್ಯಾಚರಣೆ ಮಾಡಲಾಗುತ್ತದೆ.

ಈ ಕೆಳಕಂಡ ಮಾರ್ಗಗಳಲ್ಲಿ ಕಾರ್ಯಾಚರಣೆಯನ್ನುಮಾಡಲಾಗುತ್ತದೆ.

- ಬೆಂಗಳೂರಿನಿಂದ ಕಣ್ಣೂರು, ಎರ್ನಾಕುಲಂ, ಕಾನ್ಹಂಗಾಡ್, ಕಾಸರಗೂಡು, ಕೊಟ್ಟಾಯಂ, ಕಲ್ಲಿಕೋಟೆ, ಪಾಲಘಾಟ್, ತ್ರಿಶೂರು, ತಿರುವನಂತಪುರಂ ಮತ್ತು ವಡಕರಾ ಹಾಗೂ ಸದರಿ ಸ್ಥಳಗಳಿಂದ ಬೆಂಗಳೂರಿಗೆ.
- ಮೈಸೂರಿನಿಂದ ತಿರುವನಂತಪುರಂ, ಎರ್ನಾಕುಲಂ ಮತ್ತುಕೊಟ್ಟಾಯಂ ಹಾಗೂ ಸದರಿ ಸ್ಥಳಗಳಿಂದ ಮೈಸೂರಿಗೆ.

**ಮುಖ್ಯ ಸೂಚನೆ:**

**ಕರ್ನಾಟಕದಿಂದ ಕೇರಳಕ್ಕೆ ಹೋಗುವಾಗ:**

- ಕೇರಳ ರಾಜ್ಯ ಸರ್ಕಾರದ ಆದೇಶದನ್ವಯ ಎಲ್ಲಾ ಪ್ರಯಾಣಿಕರು ಇತರೆ ರಾಜ್ಯದಿಂದ ಕೇರಳ ರಾಜ್ಯದೊಳಗೆ ಅಗಮಿಸಲು ಕೇರಳ ಸರ್ಕಾರದ ಸೇವಾಸಿಂಧು ಪೋರ್ಟಲ್‌ನಲ್ಲಿhttps://covid19jagratha.kerala.nic.inಕಡ್ಡಾಯವಾಗಿ ನೋಂದಾಯಿಸಿ ಕೊಳ್ಳುವುದು.
- ಬಸ್ಸನ್ನು ಹತ್ತುವ ಮುಂಚೆ ಪೋರ್ಟಲ್‌ನಲ್ಲಿ ನೊಂದಾಯಿಸಿ ಕೊಂಡಿರುವ ಬಗ್ಗೆ ಪುರಾವೆಯನ್ನು ಕ.ರಾ.ರ.ಸಾ. ನಿಗಮದ ಸಿಬ್ಬಂದಿಗಳಿಗೆ ತೋರಿಸುವುದು. ಇಲ್ಲದಿದ್ದಲ್ಲಿ ಬಸ್ಸಿನಲ್ಲಿ ಪ್ರಯಾಣಿಸಲು ನಿರಾಕರಿಸಲಾಗುವುದು.

**ಕೇರಳದಿಂದ ಕರ್ನಾಟಕಕ್ಕೆ ಬರುವಾಗ:**

- ಕರ್ನಾಟಕ ರಾಜ್ಯ ಸರ್ಕಾರದ ಆದೇಶದನ್ವಯ ಎಲ್ಲಾ ಪ್ರಯಾಣಿಕರು ಇತರೆ ರಾಜ್ಯದಿಂದ ಕರ್ನಾಟಕ ರಾಜ್ಯದೊಳಗೆ ಅಗಮಿಸಲು ಕರ್ನಾಟಕ ಸರ್ಕಾರದ ಸೇವಾಸಿಂಧು ಪೋರ್ಟಲ್‌ನಲ್ಲಿhttps://sevasindhu.karnataka.gov.inಕಡ್ಡಾಯವಾಗಿ ನೋಂದಾಯಿಸಿ ಕೊಳ್ಳುವುದು.
- ಬಸ್ಸನ್ನು ಹತ್ತುವ ಮುಂಚೆ ಪೋರ್ಟಲ್‌ನಲ್ಲಿ ನೊಂದಾಯಿಸಿ ಕೊಂಡಿರುವ ಬಗ್ಗೆ ಪುರಾವೆಯನ್ನು ಕ.ರಾ.ರ.ಸಾ. ನಿಗಮದ ಸಿಬ್ಬಂದಿಗಳಿಗೆ ತೋರಿಸುವುದು. ಇಲ್ಲದಿದ್ದಲ್ಲಿ ಬಸ್ಸಿನಲ್ಲಿ ಪ್ರಯಾಣಿಸಲು ನಿರಾಕರಿಸಲಾಗುವುದು.

ಇದರೊಂದಿಗೆ ಎಲ್ಲಾ ಪ್ರಯಾಣಿಕರು ಕಡ್ಡಾಯವಾಗಿ ಮಾಸ್ಕಧರಿಸುವುದು.

ಈ ಮೇಲ್ಕಂಡ ಮಾರ್ಗಗಳಲ್ಲಿ ಮುಂಗಡ ಆಸನಗಳನ್ನು www.ksrtc.inವೆಬ್‌ಸೈಟ್‌ಮತ್ತು ನಿಗಮದ/ಫ್ರಾಂಚೈಸಿ ಕೌಂಟರ್‌ಗಳ ಮುಖಾಂತರ ಕಾಯ್ದಿರಿಸಿಕೊಳ್ಳಬಹುದಾಗಿದೆ. ಪ್ರಯಾಣಿಕರು ಸದರಿ ಸೌಲಭ್ಯವನ್ನು ಸದುಪಯೋಗ ಪಡೆಯಲುಕೋರಲಾಗಿದೆ.

**Karnataka State Road Transport Corporation will operate special services to Kerala State on the occasion of Onam**

**Bengaluru, August 17 (Karnataka Information)**

Karnataka State Road Transport Corporation will operate special services to Kerala State on the occasion of Onam festival from24.08.2020 till 06.09.2020 from Bengaluru and Mysuru to various places of Kerala State.

The services will be operated on below mentioned routes

- From Bengaluru to Kannur, Ernakulam, Kanhangad, Kasaragod, Kottayam, Kozhikode, Palghat, Thrissur, Thiruvananthapuram and Vadakara and to Bengaluru from these places.
- From Mysuruto Thiruvananthapuram, Ernakulam and Kottayam and to Mysuru from these places.

**Important note:**

**<u>From Karnataka to Kerala:</u>**

- As per Kerala State Government Orders, All passengers coming from other States to Kerala shall mandatorily register in the CovidJagratha Portal of Kerala Govt. https://covid19jagratha.kerala.nic.in
- Proof of registration shall be shown to KSRTC officials before boarding the bus. Otherwise boarding will be denied.

**<u>From Kerala to Karnataka:</u>**

- As per Karnataka State Government Orders, All passengers coming from other States to Karnataka shall mandatorily register in the SevaSindu Portal of Karnataka Govt. https://sevasindhu.karnataka.gov.in
- Proof of registration shall be shown to KSRTC officials before boarding the bus. Otherwise boarding will be denied.

It is mandatory for all passengers to wear mask

Passengers can book tickets in advance online at www.ksrtc.inor through KSRTC/Franchisee advance reservation counters for the above services. The passengers are requested to avail the above facilities.